ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 821

ಸದಸ್ಯರ ಹೆಸರು : ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 25-09-2020

ಕ್ರ ಸಂ	ಪ್ರಶ್ನೆ	ಉತ್ತರ
ಅ.	ಮೈಸೂರಿನಿಂದ ನಂಜನಗೂಡಿಗೆ ಮತ್ತು ನಂಜನಗೂಡು ಮೂಲಕ ಚಾಮರಾಜನಗರ, ಗುಂಡ್ಲುಪೇಟೆ ಕಡೆಗೆ ಸಂಚರಿಸುವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳು ನಂಜನಗೂಡಿನಲ್ಲಿ ನೂತನವಾಗಿ ನಿರ್ಮಿಸಿರುವ ಬಸ್ ನಿಲ್ದಾಣಕ್ಕೆ ಹೋಗಿ ನಿಲುಗಡೆ ಮಾಡದೆ, ಹಳೆಯ ಬಸ್ ನಿಲ್ದಾಣದಲ್ಲೇ ನಿಲುಗಡೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ನೂತನ ಬಸ್ ನಿಲ್ದಾಣವು ರೈಲ್ವೆ ನಿಲ್ದಾಣ, ಖಾಸಗಿ ಬಸ್ ನಿಲ್ದಾಣ, ದೇವಾಲಯಗಳಿಗೆ ಸಮೀಪದಲ್ಲಿದ್ದರೂ ಬಸ್‌ಗಳು ಇಲ್ಲಿಗೆ ಹೋಗದಿರಲು ಕಾರಣಗಳೇನು;	ಪ್ರಸ್ತುತ ನಂಜನಗೂಡಿನಲ್ಲಿ ಎರಡು ಬಸ್ ನಿಲ್ದಾಣಗಳಿದ್ದು, ನೂತನ ಬಸ್ ನಿಲ್ದಾಣವು ನಂಜನಗೂಡಿನಿಂದ ಹೊರವಲಯದಲ್ಲಿದ್ದು, ವಿರಳ ಜನ ಸಂಖ್ಯೆ ಹೊಂದಿರುವುದರಿಂದ ಹಾಗೂ ಕೋವಿಡ್-19ರ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಒಂದು ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡುವುದು ಸೂಕ್ತವಾಗಿರುವುದರಿಂದ ಹಾಗೂ ನೂತನ ಬಸ್ ನಿಲ್ದಾಣದ ಮುಖ್ಯದ್ವಾರದ ಮುಂಭಾಗದಲ್ಲಿ ಹಳ್ಳಕೊಳ್ಳವಿರುವುದರಿಂದ ಹಳೆಯ ಬಸ್ ನಿಲ್ದಾಣದಿಂದ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.
ಆ.	ನೂತನ ಬಸ್ ನಿಲ್ದಾಣದಲ್ಲೇ ಬಸ್‌ಗಳನ್ನು ನಿಲುಗಡೆ ನೀಡುವಂತೆ ರಾಜ್ಯ ರಸ್ತೆ ಸಾರಿಗೆ ಬಸ್ ವಾಹನ ಚಾಲಕರಿಗೆ, ಸಾರಿಗೆ ಸಂಸ್ಥೆ ಅಧಿಕಾರಿಗಳಿಗೆ ಕಟ್ಟುನಿಟ್ಟಾದ ಸೂಚನೆ ನೀಡಲಾಗುವುದೇ;	ಕೋವಿಡ್-19 ಹಿನ್ನೆಲೆಯಲ್ಲಿ ವಿಧಿಸಲಾಗಿದ್ದ ಲಾಕ್‌ಡೌನ್‌ನ್ನು ಪ್ರಸ್ತುತ ಸಡಿಲಗೊಳಿಸಿರುವ ಹಿನ್ನೆಲೆಯಲ್ಲಿ ಹಾಗೂ ನೂತನ ಬಸ್ ನಿಲ್ದಾಣದ ಮುಖ್ಯದ್ವಾರದ ಮುಂಭಾಗದ ಕಾಮಗಾರಿ ಪೂರ್ಣಗೊಂಡಿರುವುದರಿಂದ, ವಾಹನಗಳ ಕಾರ್ಯಾಚರಣೆಯನ್ನು ನೂತನ ಬಸ್ ನಿಲ್ದಾಣದಿಂದ ಆಚರಣೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಹಾಗೂ ಈ ಬಗ್ಗೆ ಸಂಬಂಧಪಟ್ಟ ಚಾಲನಾ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಸೂಕ್ತ ಸೂಚನೆಗಳನ್ನು ನೀಡಲಾಗುವುದು.
ಇ.	ನೂತನ ಬಸ್ ನಿಲ್ದಾಣದಲ್ಲಿ ಇನ್ನೂ ಕೆಲವು ಕಾಮಗಾರಿಗಳು ನಡೆಯುತ್ತಿವೆಯೇ; ಈ ಕಾಮಗಾರಿಗಳನ್ನು ಕೂಡಲೇ ಪೂರ್ಣಗೊಳಿಸಿ, ನಿಲ್ದಾಣವನ್ನು ಸುಸಜ್ಜಿತಗೊಳಿಸಲಾಗುವುದೇ?	ಪ್ರಸಕ್ತ ಸಾಲಿನಲ್ಲಿ ನಂಜನಗೂಡು ಬಸ್ ನಿಲ್ದಾಣದಲ್ಲಿ ಕೂಡುರಸ್ತೆಗೆ (Approach road) ಕಾಂಕ್ರೀಟೀಕರಣದ ಕಾಮಗಾರಿ ಮಾಡಿ ಪೂರ್ಣಗೊಳಿಸಲಾಗಿರುತ್ತದೆ ಹಾಗೂ ಪ್ರಸ್ತುತ ಯಾವುದೇ ಕಾಮಗಾರಿಗಳು ಬಾಕಿ ಉಳಿದಿರುವುದಿಲ್ಲ. ನಂಜನಗೂಡು ಬಸ್ ನಿಲ್ದಾಣವನ್ನು ಎಲ್ಲಾ ಮೂಲಭೂತ ಸೌಲಭ್ಯಗಳನ್ನೊಳಗೊಂಡಂತೆ ಸುಸಜ್ಜಿತವಾಗಿ ನಿರ್ಮಿಸಲಾಗಿದೆ.

ಸಂಖ್ಯೆ: ಟಿಡಿ 159 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು